# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**27.01.2026** **18.40hrs**

***************

ಮುಖ್ಯಾಂಶಗಳು

- ಮನ್ರೇಗಾ ಯೋಜನೆ ಮರುಸ್ಥಾಪನೆ ಮಾಡುವಂತೆ ರಾಜ್ಯಪಾಲರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ನಿಯೋಗ ಮನವಿ
- ಅಬಕಾರಿ ಹಗರಣ; ಸಿಬಿಐ ತನಿಖೆಗೆ ಬಿಜೆಪಿ ಆಗ್ರಹ; ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ - ಸಚಿವ ಆರ್.ಬಿ.ತಿಮ್ಮಾಪುರ ಸ್ಪಷ್ಟನೆ
- ವಿಧಾನಸಭೆಯಲ್ಲಿ ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ ಚರ್ಚೆ; ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಸದಸ್ಯರು ಅಸಮಾಧಾನ
- ಚಾಮರಾಜನಗರದಲ್ಲಿ ಮುಂದುವರಿದ ಹುಲಿ ಕಾರ್ಯಾಚರಣೆ; ಐದು ಹುಲಿಗಳ ಪೈಕಿ ನಾಲ್ಕು ಸೆರೆ
- ಲಕ್ಕುಂಡಿಯಲ್ಲಿ ಹತ್ತನೇ ದಿನಕ್ಕೆ ಕಾಲಿಟ್ಟ ಉತ್ಖನನ ಕಾರ್ಯ; ಕಾರ್ಮಿಕರಲ್ಲಿ ಮಣ್ಣು ಕುಸಿಯುವ ಆತಂಕ

***************

ಕೇಂದ್ರ ಸರ್ಕಾರದ ವಿಕಸಿತ ಭಾರತ್ ಜಿ ರಾಮ್ ಜಿ ಯೋಜನೆಯ ವಿರುದ್ಧ "ರಾಜ್ ಭವನ ಚಲೋ" ಪ್ರತಿಭಟನೆಯ ಭಾಗವಾಗಿ ಲೋಕ ಭವನಕ್ಕೆ ಬಸ್ ಮೂಲಕ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಣ್‌ದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಕಾಂಗ್ರೆಸ್ ನಾಯಕರು ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬಡವರ ಕೆಲಸದ ಸಾಂವಿಧಾನಿಕ ಹಕ್ಕನ್ನು ಕಸಿದುಕೊಳ್ಳುವ ವಿಕಸಿತ ಭಾರತ್ ಜಿ ರಾಮ್ ಜಿ ಕಾಯ್ದೆ ಗ್ರಾಮೀಣ ಪ್ರದೇಶದ ಬಡ ಕಾರ್ಮಿಕರಿಗೆ ಮಾರಕವಾಗಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಸುಮಾರು ೭೧ ಲಕ್ಷ ಮಂದಿ ಕಾರ್ಮಿಕರಿದ್ದು, ಇವರಲ್ಲಿ ಶೇಕಡ ೫೩ ರಷ್ಟು ಮಹಿಳೆಯರು, ಶೇಕಡ ೨೮ ರಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರು ಸೇರಿದ್ದಾರೆ.

ಹೊಸ ಕಾಯ್ದೆಯಡಿ ಬಡ ಕೂಲಿ ಕಾರ್ಮಿಕರ ಕೆಲಸದ ಸ್ಥಳ ಮತ್ತು ದಿನಗಳನ್ನು ಕೇಂದ್ರ ಸರ್ಕಾರ ನಿರ್ಧಾರ ಮಾಡಲಿದೆ ಎಂದು ತಿಳಿಸಿದ್ದಾರೆ. ಮನ್ರೇಗಾ ಪುನರ್ ಸ್ಥಾಪನೆಯಾಗುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉದ್ಯೋಗ ಖಾತರಿಯಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ನೂತನ ಕಾಯ್ದೆ ಹಿಂಪಡೆದು ಮನ್ರೇಗಾ ಮರುಸ್ಥಾಪನೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಒತ್ತಡ ಹಾಕುವಂತೆ ರಾಜ್ಯಪಾಲರಿಗೆ ಮನವಿ ಮಾಡಿದರು.

ಧ್ವನಿ; ಸಿಎಂ

***************

ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಿಲ್ಲ ಎಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದನದಲ್ಲಿ ಈ ಕುರಿತಂತೆ ಸ್ಪಷ್ಟೀಕರಣ ನೀಡುವುದಾಗಿ ತಿಳಿಸಿದ್ದಾರೆ.

ಬಿಜೆಪಿ ನಾಯಕರು ಮೊದಲು ಈ ಆರೋಪವನ್ನು ಸದನದಲ್ಲಿ ಪ್ರಸ್ತಾಪಿಸಿದ ಬಳಿಕ ಎಲ್ಲಾ ಆರೋಪಗಳಿಗೂ ಉತ್ತರಿಸುವುದಾಗಿ ಹೇಳಿದ್ದಾರೆ.

***************

ರಾಜ್ಯದಲ್ಲಿ ಕೇಳಿಬಂದಿರುವ ಅಬಕಾರಿ ಹಗರಣ ಕುರಿತಂತೆ ಹಾಲಿ ಹೈಕೋರ್ಟ್ ನ್ಯಾಯಾಧೀಶರು, ಇಲ್ಲವೇ ಸಿಬಿಐ ತನಿಖೆ ನಡೆಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಬಕಾರಿ ಹಗರಣದಲ್ಲಿ ಸಚಿವರ ಹೆಸರು ಕೇಳಿಬರುತ್ತಿದ್ದರೂ, ಸದನದಲ್ಲಿ ಈ ವಿಷಯದ ಬಗ್ಗೆ ಚರ್ಚೆಗೆ ಅವಕಾಶ ನೀಡುತ್ತಿಲ್ಲ ಎಂದು ದೂರಿದ್ದಾರೆ.

ಸರ್ಕಾರವು ಗ್ರಾಮೀಣ ದಿನಸಿ ಅಂಗಡಿಗಳಲ್ಲಿಯೂ ಮದ್ಯ ಮಾರಾಟಕ್ಕೆ ಅವಕಾಶ ನೀಡಿದೆ ಎಂದು ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

***************

ವಿಧಾನಸಭೆಯಲ್ಲಿಂದು ಭೋಜನ ವಿರಾಮದ ನಂತರ ಕಲಾಪ ಪುನಃ ಸೇರುತ್ತಿದ್ದಂತೆ ಆಡಳಿತ ಪಕ್ಷ ಸದಸ್ಯ ಎ.ಎಸ್.ಪೊನ್ನಣ್ಣ ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ ಚರ್ಚೆ ಮುಂದುವರಿಸಿ ಸಂವಿಧಾನದ ಆರ್ಟಿಕಲ್ ೧೭೬ ರ ಪ್ರಕಾರ ಸರ್ಕಾರ ಸಿದ್ದಪಡಿಸಿದ ಸಚಿವ ಸಂಪುಟ ಒಪ್ಪಿಗೆ ನೀಡಿದ ಭಾಷಣವನ್ನು ಯಾವುದೇ ಬದಲಾವಣೆ ಮಾಡದೆ ರಾಜ್ಯಪಾಲರು ಕಡ್ಡಾಯವಾಗಿ ಓದಬೇಕು ಎಂದು ಹೇಳಿದರು.

ಪೊನ್ನಣ್ಣ ಮಾತಿಗೆ ಪಾಯಿಂಟ್ ಆಫ್ ಆರ್ಡರ್ ಎತ್ತಿದ ಬಿಜೆಪಿ ಸದಸ್ಯ ಸುರೇಶ ಕುಮಾರ್ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯ ಎಂದರೆ ಭಾಷಣ ಮೇಲಿನ ಅಂಶಗಳ ಮೇಲೆ ಚರ್ಚೆ ಮಾಡಬೇಕೆ ವಿನಹ ರಾಜ್ಯಪಾಲರ ಬಗ್ಗೆ ಚರ್ಚೆ ಮಾಡುವುದಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯಪ್ರವೇಶಿಸಿ ಮಾತನಾಡಿ ಸರ್ಕಾರಕ್ಕೆ ವಿವೇಕ ವಿವೇಚನೆ ಎರಡೂ ಇದೆ. ಪೊನ್ನಣ್ಣ ಅವರು ರಾಜ್ಯಪಾಲರ ಬಗ್ಗೆ ಮಾತನಾಡುತ್ತಿಲ್ಲ. ಸಂವಿಧಾನದ ೧೬೩ ಹಾಗೂ ೧೭೬ ನಿಯಮದ ಬಗ್ಗೆ ಬೆಳಕು ಚೆಲ್ಲಿದ್ದಾರೆ ಎಂದು ಪೊನ್ನಣ್ಣ ಅವರನ್ನು ಸಮರ್ಥನೆ ಮಾಡಿದರು.

ಸರ್ಕಾರ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಯಶಸ್ವಿಯಾಗಿದ್ದು. ಈ ಸರ್ಕಾರದ ಅವಧಿಯಲ್ಲಿ ಒಂದೇ ಒಂದು ಕೋಮು ಸಂಘರ್ಷ ನಡೆಯಲಿಲ್ಲ. ಮಾದಕದ್ರವ್ಯ ಜಾಲ ಮಟ್ಟ ಹಾಕಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ ಎಂದು ಸಮರ್ಥಿಸಿಕೊಂಡರು.

ಇದೇ ವೇಳೆ ಮನ್ರೇಗಾ ಯೋಜನೆ ರದ್ದು ಕುರಿತಂತೆ ಆಡಳಿತ ಪಕ್ಷದ ಸದಸ್ಯರು ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

***************

ಚಾಮರಾಜನಗರ ತಾಲೂಕಿನ ನಂಜೇದೇವನಪುರದಲ್ಲಿ ೫ ಹುಲಿಗಳು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾರ್ಯಾಚರಣೆ ನಡೆಸಿದ ಅರಣ್ಯಾಧಿಕಾರಿಗಳು ಇಂದು ಮತ್ತೊಂದು ಹುಲಿ ಮರಿಯನ್ನು ಸೆರೆ ಹಿಡಿದಿದ್ದಾರೆ.

ಸೆರೆಯಾಗಿರುವ ಹುಲಿಯು ಹೆಣ್ಣು ಮರಿಯಾಗಿದ್ದು ೧೦ ತಿಂಗಳಾಗಿರಬಹುದು ಎಂದು ಬಿಳಿಗಿರಿರಂಗನಾಥ ದೇವಾಲಯ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

೫ ಹುಲಿಗಳ ಪೈಕಿ ೪ ಹುಲಿಗಳು ಸೆರೆಯಾಗಿದ್ದು ಇನ್ನು ೧ ಹುಲಿಮರಿಗಾಗಿ ನಾಲ್ಕು ಸಾಕಾನೆಗಳ ಸಹಾಯದಿಂದ ಕಾರ್ಯಾಚರಣೆ ನಡೆಸಲಾಗುತ್ತಿದೆ, ಹುಲಿ ಸೆರೆ ಕಾರ್ಯಾಚರಣೆ ವೇಳೆ ಯಾವುದೇ ಅವಘಡ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ನಂಜೇದೇವನಪುರ, ಉಡಿಗಾಲ ಹಾಗೂ ವೀರನಪುರದಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

***************

ಗದಗ ಜಿಲ್ಲೆಯ ಪ್ರಸಿದ್ಧ ಐತಿಹಾಸಿಕ ತಾಣವಾದ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯವು ಇಂದು ೧೦ನೇ ದಿನಕ್ಕೆ ಕಾಲಿಟ್ಟಿದೆ.

ಎರಡು ದಿನಗಳ ಬಿಡುವಿನ ನಂತರ ಇಂದು ಬೆಳಿಗ್ಗೆಯಿಂದಲೇ ಉತ್ಖನನ ಕಾರ್ಯ ಪುನರಾರಂಭಗೊಂಡಿದೆ.

ಉತ್ಖನನಕ್ಕಾಗಿ ನಿರ್ಮಿಸಲಾದ ಂ-೧ ಮತ್ತು ಃ-೧ ಗುಂಡಿಗಳಲ್ಲಿ ಈಗ ಬಿರುಕು ಕಾಣಿಸಿಕೊಂಡಿದೆ. ಇದರಿಂದಾಗಿ ಆ ಗುಂಡಿಗಳ ಕೆಳಭಾಗದಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಲ್ಲಿ ಆತಂಕ ಮನೆಮಾಡಿದೆ. ಬೃಹತ್ ಬಂಡೆ ಅಥವಾ ಮಣ್ಣು ಕುಸಿಯುವ ಭೀತಿಯ ನಡುವೆಯೇ ಕಾರ್ಮಿಕರು ಕೆಲಸ ಮುಂದುವರಿಸಿದ್ದಾರೆ.

ಬಿರುಕು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಪುರಾತತ್ವ ಇಲಾಖೆಯ ಹಿರಿಯ ಅಧಿಕಾರಿ ಡಾ. ಶೇಜೇಶ್ವರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಿರುಕು ಬಿಟ್ಟಿರುವ ಜಾಗದ ಸುರಕ್ಷತೆಯ ಬಗ್ಗೆ ತಾಂತ್ರಿಕವಾಗಿ ಪರಿಶೀಲನೆ ನಡೆಸಲಾಗುತ್ತಿದ್ದು, ಕಾರ್ಮಿಕರ ಸುರಕ್ಷತೆಗೆ ಆದ್ಯತೆ ನೀಡುವಂತೆ ಸೂಚಿಸಿದ್ದಾರೆ.

***************

ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ, ಬ್ಯಾಂಕ್ ಸಂಘಗಳ ಸಂಯುಕ್ತ ವೇದಿಕೆ ಇಂದು ದೇಶವ್ಯಾಪಿ ಕರೆ ನೀಡಿರುವ ಮುಷ್ಕರ ಬೆಂಬಲಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಬ್ಯಾಂಕ್ ಸಿಬ್ಬಂದಿ ಮುಷ್ಕರ ನಡೆಸಿದರು.

ಬ್ಯಾಂಕ್ ನೌಕರರ ಮುಷ್ಕರದಿಂದಾಗಿ ಬ್ಯಾಂಕ್ ವಹಿವಾಟುಗಳು ಅಸ್ತವ್ಯಸ್ತವಾಗಿದ್ದವು.

ವಾರದಲ್ಲಿ ಐದು ದಿನ ಕೆಲಸ ಎರಡು ದಿನ ರಜೆ ನೀಡಬೇಕೆಂದು ಆಗ್ರಹಿಸಿ ರಾಷ್ಟ್ರೀಕೃತ ಬ್ಯಾಂಕ್ ನೌಕರರು ಇಂದು ಬಳ್ಳಾರಿಯಲ್ಲಿ ಬ್ಯಾಂಕ್ ಕೆಲಸ ಸ್ಥಗಿತಗೊಳಿಸಿ ಮುಷ್ಕರ ನಡೆಸಿದರು.

ಪತಿಭಟನೆ ಮೂಲಕ ಎಸ್ ಬಿ ಐ ಬ್ಯಾಂಕ್ ಪ್ರಧಾನ ಕಚೇರಿ ಆವರಣಕ್ಕೆ ಬಂದ ನೌಕರರು ಕಳೆದ ಹತ್ತು ವರ್ಷದಿಂದ ತಮ್ಮ ಈ ಬೇಡಿಕೆ ಈಡೇರಿಸದ ಕೇಂದ್ರ ಸರ್ಕಾರದ ವಿರುದ್ಧ ಅಸಮಾಧಾನ

ವ್ಯಕ್ತಪಡಿಸಿದರು. ಬೇಡಿಕೆ ಈಡೇರಿಸುವವರೆಗೂ ನಮ್ಮ ಹೋರಾಟ ನಿಲ್ಲೋದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ರಾಷ್ಟ್ರೀಕೃತ ಬ್ಯಾಂಕ್‌ಗಳ ಖಾಸಗಿಕರಣ ಕೈ ಬಿಡಬೇಕು ಎಂದು ಆಗ್ರಹಿಸಿದ್ದಾರೆ.

***************

ಅಪ್ರಾಪ್ತ ವಯಸ್ಸಿನವರಿಂದ ವಾಹನ ಚಾಲನೆ ಮತ್ತು ಮದ್ಯಪಾನ ಮಾಡಿ ವಾಹನ ಚಲಾಯಿಸಿ ಅಪಘಾತಕ್ಕೆ ಕಾರಣವಾಗಿ ಇನ್ನೊಬ್ಬರ ಪ್ರಾಣಕ್ಕೆ ಕುತ್ತು ತರುವ ಘಟನೆಗಳನ್ನು ಇನ್ನು ಮುಂದೆ ಶಿಕ್ಷಾರ್ಹ ನರಹತ್ಯೆ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳಲಾಗುವುದು ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಎಚ್ಚರಿಕೆ ನೀಡಿದ್ದಾರೆ.

ಮಂಗಳೂರಿನಲ್ಲಿಂದು ಆಯೋಜಿಸಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಕುರಿತು ಸಾಕಷ್ಟು ಜಾಗೃತಿ ಮೂಡಿಸಿದರೂ ನಿಯಮ ಪಾಲನೆ ಆಗುತ್ತಿಲ್ಲ. ಮಂಗಳೂರು ನಗರ ವ್ಯಾಪ್ತಿಯಲ್ಲಿ ೨೦೨೫ನೇ ಸಾಲಿನಲ್ಲಿ ಒಂದು ಸಾವಿರದ ೨೦ ರಸ್ತೆ ಅಪಘಾತ ಪ್ರಕರಣಗಳು ಸಂಭವಿಸಿದ್ದು, ಇದರಲ್ಲಿ ೧೭೧ ಮಂದಿ ಸಾವನ್ನಪ್ಪಿದ್ದಾರೆ. ೨೫ ಪ್ರಕರಣಗಳಲ್ಲಿ ಅಪ್ರಾಪ್ತರು ವಾಹನ ಚಲಾಯಿಸಿರುವುದು ಪತ್ತೆಯಾಗಿದೆ ಎಂದು ಹೇಳಿದ್ದಾರೆ.

***************

ಕೆಳಹಂತದ ಅಧಿಕಾರಿಗಳು ನೀಡುವ ಅಂಕಿ ಅಂಶಗಳೇ ಜಿಲ್ಲೆಯ ಸುಸ್ಥಿರ ಅಭಿವೃದ್ಧಿಗೆ ಮಾನದಂಡ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಹೇಳಿದ್ದಾರೆ.

ಜಿಲ್ಲಾ ಪಂಚಾಯ್ತಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಾನವ ಅಭಿವೃದ್ಧಿ-೨೦೨೫ ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-೨೦೩೧ ವರದಿ ತಯಾರಿಕೆ ಕುರಿತು ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಅಭಿವೃದ್ಧಿ ದೃಷ್ಟಿಯಿಂದ ವರದಿ ತಯಾರಿಸುವ ಸಂದರ್ಭದಲ್ಲಿ ಅಧಿಕಾರಿಗಳು ಯಾವುದೇ ಪೂರ್ವಾಗ್ರಹಗಳಿಲ್ಲದೆ ನಿಖರ ಮಾಹಿತಿಯನ್ನು ನೀಡಬೇಕು ಎಂದು ಸೂಚಿಸಿದ್ದಾರೆ.

*******ಮುಕ್ತಾಯ*******